# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 43 |
| ಸದಸ್ಯರ ಹೆಸರು | : | ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 09-12-2024 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಕೇಂದ್ರ ಸರ್ಕಾರವು ರೂಪಿಸಿರುವ (KREDL) ಸೋಲಾರ್ ಪಂಪ್ ಸೆಟ್ ರೈತರಿಗೆ ನೀಡುವ ಉದ್ದೇಶ ಯಾವ ಹಂತದಲ್ಲಿದೆ. | ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಕೇಂದ್ರ ಸರ್ಕಾರವು ರೂಪಿಸಿರುವ PM KUSUM – B ಯೋಜನೆಯಡಿ ರೈತರಿಗೆ ಸೋಲಾರ್ ಪಂಪ್‌ಸೆಟ್ ನೀಡುವ ಯೋಜನೆ ಜಾರಿಯಲ್ಲಿರುತ್ತದೆ. ಸದರಿ ಯೋಜನೆಯಡಿ 2024-25 ಹಾಗೂ 2025-26 ನೇ ಸಾಲಿನಲ್ಲಿ 40000 ಸೌರ ಪಂಪ್‌ಸೆಟ್‌ಗಳನ್ನು ಅಳವಡಿಸುವ ಗುರಿಯನ್ನು ಹೊಂದಿದ್ದು, ಈಗಾಗಲೇ 267 ಸೌರ ಪಂಪ್‌ಸೆಟ್‌ಗಳನ್ನು ಅನುಷ್ಠಾನಗೊಳಿಸಲಾಗಿದೆ. |
| ಆ) | ಈವರೆಗೆ ರಾಜ್ಯದ ಎಷ್ಟು ರೈತರು ಸೋಲಾರ್ ಪಂಪ್ ಪಡೆಯಲು ಅರ್ಜಿ ಸಲ್ಲಿಸಿದ್ದಾರೆ. | ಈವರೆಗೆ ರಾಜ್ಯದ 38247 ರೈತರು ಸೋಲಾರ್ ಪಂಪ್ ಪಡೆಯಲು ಅರ್ಜಿ ನೊಂದಾಯಿಸಿರುತ್ತಾರೆ. |
| ಇ) | ಅರ್ಜಿ ಸಲ್ಲಿಸಿದ ಎಷ್ಟು ರೈತರಿಗೆ ಸೋಲಾರ್ ಪಂಪ್ ಸೆಟ್ ನೀಡಲಾಗಿದೆ. | ಅರ್ಜಿ ಸಲ್ಲಿಸಿದ 267 ರೈತರಿಗೆ ಸೋಲಾರ್ ಪಂಪ್ ಸೆಟ್ ನೀಡಲಾಗಿದೆ. |
| ಈ) | ಯಾವ ಮಾನದಂಡದ ಮೇಲೆ ರೈತರಿಗೆ ಸೋಲಾರ್ ಪಂಪ್ ಸೆಟ್ ಸರಬರಾಜುದಾರರನ್ನು ಆಯ್ಕೆ ಮಾಡಲಾಗುತ್ತಿದೆ. (ವಿವರ ನೀಡುವುದು) | KTPP portal ಮುಖಾಂತರ ಟೆಂಡರ್ ಆಹ್ವಾನಿಸಿ 13 ವೆಂಡರ್‌ಗಳನ್ನು ಸೋಲಾರ್ ಪಂಪ್‌ಸೆಟ್ ಸರಬರಾಜುದಾರರನ್ನಾಗಿ Empanel ಮಾಡಲಾಗಿರುತ್ತದೆ |
| ಉ) | ಅರ್ಜಿ ಸಲ್ಲಿಸಿರುವ ರೈತರಿಗೆ ಸರಬರಾಜು (ವೆಂಡರ್) ದಾರರ ಆಯ್ಕೆ ಮಾಡಿಕೊಳ್ಳಲು ಸಾಫ್ಟ್ ವೇರ್ ನಲ್ಲಿ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪರಿಹಾರ ಏನು? (ವಿವರ ನೀಡುವುದು) | ರೈತರಿಗೆ ಸಾಫ್ಟ್‌ವೇರ್‌ನಲ್ಲಿ ಅರ್ಜಿ ಸಲ್ಲಿಸುವ ಅವಕಾಶವಿದ್ದು, ಈಗಾಗಲೇ 38247 ರೈತರು ನೋಂದಣಿ ಮಾಡಿಕೊಂಡಿರುತ್ತಾರೆ. ಮುಂದುವರೆದು ಸಾಫ್ಟ್‌ವೇರ್‌ನಲ್ಲಿನ ತಾತ್ಕಾಲಿಕ ಸಮಸ್ಯೆಯು ಸರ್ಕಾರದ ಗಮನಕ್ಕೆ ಬಂದಿದ್ದು, 15 ದಿನದೊಳಗಾಗಿ ಸಮಸ್ಯೆ ಸರಿಪಡಿಸಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಎನರ್ಜಿ 332 ಇಬಿಎಸ್ 2024

(ಕೆ.ಜೆ.ಜಾರ್ಜ್)
ಇಂಧನ ಸಚಿವರು